ರಾಜ್ಯದ ಪ್ರೌಢ ಶಾಲೆಗಳಲ್ಲಿ ವಿಷಯ ಭೋಧಕ ಶಿಕ್ಷಕರ ಕೊರತೆ

546 (930) ಶ್ರೀ ಸುಭಾಷ್ ಆರ್. ಗುತ್ತೇದಾರ್ (ಅಳಂದ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರೌಢ ಶಾಲೆಗಳಲ್ಲಿ ವಿಜ್ಞಾನ, ಗಣಿತ ಮತ್ತು ಆಂಗ್ಲ ವಿಷಯ ಬೋಧಕ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕೊರತೆ ಇರುವ ಶಿಕ್ಷಕರುಗಳ ಸಂಖ್ಯೆ ಎಷ್ಟು? ಎಷ್ಟು ವರ್ಷಗಳಿಂದ ಈ ಕೊರತೆ ಇರುತ್ತದೆ. [ಸಂಪೂರ್ಣ ಮಾಹಿತಿ ನೀಡುವುದು]

ಇ) ಈ ಸಮಸ್ಯೆ ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೆತ್ತಿಕೊಂಡಿದೆ ವಿವರ ನೀಡುವುದು]?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ವಿಜ್ಞಾನ, ಗಣಿತ ಮತ್ತು ಆಂಗ್ಲ ವಿಷಯ ಬೋಧಕ ಶಿಕ್ಷಕರ ಹುದ್ದೆ ಖಾಲಿ ಇರುವ ಮಹಿತಿ ಈ ಕೆಳಕಂಡಂತಿದೆ.

1] ವಿಜ್ಞಾನ [ಸಿಬಿಝಡ್]	327
2] ಗಣಿತ [ಪಿಸಿಎಂ]	382
3] ಆಂಗ್ಲ	259

2010–11ನೇ ಸಾಲಿನಿಂದ ಈ ಹುದ್ದೆಗಳು ಖಾಲಿ ಇರುತ್ತವೆ.

ಇ) ಶೈಕ್ಷಣಿಕ ಪ್ರಗತಿಗೆ ಧಕ್ಕೆಯಾಗದಂತೆ ಸರ್ಕಾರದ ಆದೇಶ ಸಂಖ್ಯೆ ಇಡಿ 138 ಯೋಯೋಕ 2010, ದಿನಾಂಕ: 13.12.2010 ರಲ್ಲಿ 1317 ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ, ಸ್ಥಳೀಯವಾಗಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.